All India Radio: Bangalore

Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

03.06.2025 2.30 P.M.

<><><><>

ಮುಖ್ಯಾಂಶಗಳು

- ದೇಶದ ಜನರ ಆರೋಗ್ಯ ಸಂರಕ್ಷಣೆ ಕೇಂದ್ರ ಸರ್ಕಾರದ ಗುರಿ - ಆರೋಗ್ಯ ಸಚಿವ ಜೆ.ಪಿ. ನಡ್ಡಾ
- ಭಾರತಕ್ಕೆ ಉತ್ಪಾದನೆಯಲ್ಲಿ ಶೀಘ್ರವೇ ಮೊದಲ ಸ್ಥಾನ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ವಿಶ್ವಾಸ
- ಜನರ ಭಾವನೆಗಳನ್ನು ನೋಯಿಸಲು ಅಭಿವ್ಯಕ್ತಿ ಸ್ವಾತಂತ್ರ್ಯ ಬಳಸಬೇಡಿ - ನಟ ಕಮಲಹಾಸನ್ ವಿರುದ್ಧ ಉಚ್ಚನ್ಯಾಯಾಲಯ ಅಸಮಾಧಾನ
- ಸಚಿವ ಈಶ್ವರ್ ಖಂಡ್ರೆ ಭೇಟಿ ಮಾಡಿದ ಅರಣ್ಯ, ವನ್ಯಜೀವಿ ರಾಯಭಾರಿ ಅನಿಲ್ ಕುಂಬ್ಳೆ
- ಐಪಿಎಲ್ ಟೂರ್ನಿಯ ಫೈನಲ್‌ನಲ್ಲಿಂದು ಪ್ರಶಸ್ತಿಗಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು- ಪಂಜಾಬ್ ಕಿಂಗ್ಸ್ ಮುಖಾಮುಖಿ

<><><><>

ಮುಂದಿನ ಆಡಳಿತಾವಧಿಯ ೫ ವರ್ಷಗಳಲ್ಲಿ ಸ್ನಾತಕ-ಸ್ನಾತಕೋತ್ತರ ವೈದ್ಯಕೀಯ ಸೀಟುಗಳನ್ನು ೭೫ ಸಾವಿರಕ್ಕೆ ಹೆಚ್ಚಳ ಮಾಡುವ ಉದ್ದೇಶ ಹೊಂದಲಾಗಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಜೆ.ಪಿ. ನಡ್ಡಾ ತಿಳಿಸಿದ್ದಾರೆ. ಬೆಳಗಾವಿಯ ಕೆಎಲ್‌ಇ ವಿಶ್ವ ವಿದ್ಯಾಲಯದಲ್ಲಿ ನಡೆದ ೧೫ನೇ ಘಟಿಕೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವೈದ್ಯಕೀಯ ಕ್ಷೇತ್ರದಲ್ಲಿ ಹೊಸ ಹೊಸ ಸಂಶೋಧನೆಗೆ ವಿಫುಲ ಅವಕಾಶಗಳಿದ್ದು, ನಿರಂತರ ಅಧ್ಯಯನ ಮೂಲಕ ಸಾಧಿಸಬೇಕೆಂದು ಹೇಳಿದ್ದಾರೆ. ಹೊಸ ಆರೋಗ್ಯ ನೀತಿಯ ಮೂಲಕ ರೋಗ ತಡಗಟ್ಟುವಿಕೆ, ಗುಣಪಡಿಸುವಿಕೆ, ಉಪಶಮನ ಮತ್ತು ಆರೋಗ್ಯ ಶಿಕ್ಷಣಕ್ಕೆ ಕೇಂದ್ರ ಸರ್ಕಾರ ಒತ್ತು ನೀಡುತ್ತಿದೆ ಎಂದು ತಿಳಿಸಿದ್ದಾರೆ. ದೇಶಾದ್ಯಂತ ೧ ಲಕ್ಷದ ೭೭ ಸಾವಿರ ಆಯುಷ್ಮಾನ್ ಆರೋಗ್ಯ ಮಂದಿರಗಳನ್ನು ರೋಗಗಳನ್ನು ಪತ್ತೆ ಹಚ್ಚಲು ಹಾಗೂ ತಡೆಗಟ್ಟಲು, ಸಾಮೂಹಿಕ ತಪಾಸಣೆ ನಡೆಸಲು ತೆರೆಯಲಾಗಿದೆ. ಇದರ ಭಾಗವಾಗಿ ೨೯ ಕೋಟಿ ೩೫ ಲಕ್ಷ ಜನರನ್ನು ಬಾಯಿಯ ಕ್ಯಾನ್ಸರ್ ಕುರಿತಂತೆ ಪರೀಕ್ಷಿಸಲಾಯಿತು ಎಂದು ಸ್ಪಷ್ಟಪಡಿಸಿದ್ದಾರೆ. ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಮಾತನಾಡಿ, ಇಂದು ಪ್ರತಿಭಾವಂತ ವೈದ್ಯರ ಅವಶ್ಯಕತೆ ಇದೆ ಎಂದು ಪ್ರತಿಪಾದಿಸಿದ್ದಾರೆ. ಸಾಮಾನ್ಯ ಜನರ ಆರೋಗ್ಯ ಕಾಪಾಡಲು ಕೇಂದ್ರ ಸರ್ಕಾರ ಆಯುಷ್ಮಾನ್ ಭಾರತ್ ಯೋಜನೆ ಹಾಗೂ ಜನೌಷಧಿ ಕೇಂದ್ರಗಳ ಅವಕಾಶ ಕಲ್ಪಿಸಿದೆ ಎಂದು ತಿಳಿಸಿದ್ದಾರೆ.

<><><><>

ಭಾರತವು ಜಗತ್ತಿನ ಕಾರ್ಖಾನೆಯಾಗಲಿದ್ದು, ಉತ್ಪಾದನೆಯಲ್ಲಿ ಶೀಘ್ರವೇ ಮೊದಲ ಸ್ಥಾನಕ್ಕೆ ಏರಲಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ. ಧಾರವಾಡದ ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆಯಲ್ಲಿ ನೂತನ ಹಾಸ್ಟೆಲ್ ಕಟ್ಟಡಕ್ಕೆ ಅಡಿಗಲ್ಲು ನೆರವೇರಿಸಿ ಮಾತನಾಡಿದ ಅವರು, ತಂತ್ರಜ್ಞಾನವಿಲ್ಲದೆ ನಾವು ಮುಂದುವರಿಯಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಭಾರತ ಈಗ ಶೇಕಡ ೯೭ ರಷ್ಟು ಐಫೋನ್ ಉತ್ಪಾದಿಸುತ್ತಿದ್ದು, ಭಾರತದ ಐಫೋನ್‌ಗೆ ಈಗ ಬೇಡಿಕೆ ಹೆಚ್ಚಾಗಿದೆ ಎಂದು ಹೇಳಿದ್ದಾರೆ.

**ಧ್ವನಿ : ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ (೨೧ ಸೆಕೆಂಡ್‌ಗಳು)**

<><><><>

ಕನ್ನಡ ಭಾಷೆಯ ಮೂಲದ ಬಗ್ಗೆ ನಟ ಕಮಲ್‌ಹಾಸನ್ ನೀಡಿದ ವಿವಾದಾತ್ಮಕ ಹೇಳಿಕೆಗೆ ಉಚ್ಚನ್ಯಾಯಾಲಯ ಅಸಮಾಧಾನ ವ್ಯಕ್ತಪಡಿಸಿದೆ. ತಮ್ಮ ತಪ್ಪಿಗೆ ಪೊಲೀಸರು ಯಾಕೆ ಭದ್ರತೆ ನೀಡಬೇಕು ಎಂದು ನ್ಯಾಯಾಲಯ

ಪ್ರಶ್ನಿಸಿದೆ. ಭಾವನೆಗಳನ್ನು ನೋಯಿಸಲು ಮಾತಿನ ಹಕ್ಕನ್ನು ಬಳಸಬೇಡಿ ಎಂದು ಹೇಳಿದೆ. ಕರ್ನಾಟಕದಲ್ಲಿನ ಚಿತ್ರಮಂದಿರಗಳೂ ಮತ್ತು ಮಲ್ಟಿಪ್ಲೆಕ್ಸ್‌ಗಳಲ್ಲಿ ತಮ್ಮ ಥಗ್‌ಲೈಫ್ ಚಿತ್ರದ ಪ್ರದರ್ಶನಕ್ಕೆ ಭದ್ರತೆ ಕೋರಿ ಕಮಲಹಾಸನ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯ ಸಂದರ್ಭದಲ್ಲಿ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ನೇತೃತ್ವದ ಪೀಠ ಈ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದೆ. ಜನರಿಂದ ಲಾಭಗಳಿಸಲು ಬಯಸುವ ನೀವು ಕ್ಷಮೆಯಾಚಿಸುವುದಿಲ್ಲ ಎಂದಾದರೆ ಚಿತ್ರವನ್ನು ಬಿಡುಗಡೆ ಮಾಡಲು ಯಾಕೆ ಬಯಸುತ್ತೀರಿ ಎಂದು ಪ್ರಶ್ನಿಸಿದ್ದಾರೆ. ಕ್ಷಮೆಯಾಚಿಸುವ ಕುರಿತಂತೆ ಕಮಲಹಾಸನ್ ನಿಲುವನ್ನು ಸ್ಪಷ್ಟಪಡಿಸುವಂತೆ ಅವರ ಪರ ವಕೀಲರಿಗೆ ತಿಳಿಸಿದ ನ್ಯಾಯಾಲಯ, ವಿಚಾರಣೆಯನ್ನು ಮಧ್ಯಾಹ್ನ ೨.೩೦ರವರೆಗೆ ಮುಂದೂಡಿದೆ.

<><><><>

ವನ್ಯಜೀವಿ, ಅರಣ್ಯ ಸಂರಕ್ಷಣೆ ಮತ್ತು ಸಂವರ್ಧನೆಗೆ ಹಿರಿಯ ಕ್ರಿಕೆಟ್ ಆಟಗಾರ ಅನಿಲ್ ಕುಂಬ್ಳೆ ಬಲ ನೀಡಿದ್ದಾರೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಪರಿಸರ ಪ್ರೇಮಿ ಅನಿಲ್ ಕುಂಬ್ಳೆ ಅವರೊಂದಿಗೆ ಸಮಾಲೋಚಿಸಿದ ಬಳಿಕ ಮಾತನಾಡಿದ ಅವರು, ಕುಂಬ್ಳೆ ಪರಿಸರದ ಬಗ್ಗೆ ಅಪಾರ ಕಾಳಜಿ ಮತ್ತು ಪ್ರೀತಿ ಹೊಂದಿದ್ದಾರೆ. ಈ ಹಿನ್ನೆಲೆಯಲ್ಲಿ ಅವರು ಯಾವುದೇ ಸಂಭಾವನೆ ಇಲ್ಲದೆ ಅರಣ್ಯ, ವನ್ಯಜೀವಿ ರಾಯಭಾರಿ ಆಗಲು ಸಮ್ಮತಿಸಿದ್ದು, ಇದು ಅವರ ಪರಿಸರ ಕಾಳಜಿ, ಬದ್ಧತೆಗೆ ಸಾಕ್ಷಿಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಅನಿಲ್ ಕುಂಬ್ಳೆ ಮಾತನಾಡಿ, ತಮ್ಮನ್ನು ಅರಣ್ಯ, ವನ್ಯಜೀವಿ ರಾಯಭಾರಿಯಾಗಿ ನೇಮಕ ಮಾಡಲು ಸರ್ಕಾರ ನಿರ್ಧರಿಸಿರುವುದಕ್ಕೆ ಧನ್ಯವಾದ ತಿಳಿಸಿದ್ದಾರೆ. ಇಲಾಖೆಯ ಜೊತೆಗೂಡಿ ಅರಣ್ಯ, ವನ್ಯಜೀವಿ ಸಂರಕ್ಷಣೆ ಮತ್ತು ಸಂವರ್ಧನೆಗೆ ಶ್ರಮಿಸುವುದಾಗಿ ಭರವಸೆ ನೀಡಿದ್ದಾರೆ.

<><><><>

ಮುಂಗಾರು ಮಳೆಯ ಹಿನ್ನೆಲೆಯಲ್ಲಿ ಪ್ರವಾಸಿಗರ ಹಾಗೂ ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಜಿಲ್ಲೆಯ ಕಡಲತೀರ, ನದಿ ಹಾಗೂ ನದಿತೀರಗಳಲ್ಲಿ ಬೋಟಿಂಗ್ ಹಾಗೂ ಜಲಸಾಹಸ ಕ್ರೀಡೆಗಳನ್ನು ಸೆಪ್ಟೆಂಬರ್ ೩೦ ರವರೆಗೆ ನಿಷೇಧಿಸಿ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮಿ ಪ್ರಿಯ ಆದೇಶಿಸಿದ್ದಾರೆ. ನಿಯಮ ಉಲ್ಲಂಘಿಸಿ ಬೋಟಿಂಗ್ ಚಟುವಟಿಕೆ ಕೈಗೊಂಡಲ್ಲಿ ಪರವಾನಿಗೆ ರದ್ದು ಪಡಿಸಿ ಕಪ್ಪು ಪಟ್ಟಿಗೆ ಸೇರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಇನ್ನೊಂದೆಡೆ ಕೊಡಗಿನ ಕಾವೇರಿ ಮತ್ತು ಹಾರಂಗಿ ಜಲಾನಯನ ವ್ಯಾಪ್ತಿಯಲ್ಲಿ ಹೆಚ್ಚಿನ ಮಳೆಯಾಗುತ್ತಿರುವುದರಿಂದಾಗಿ ಪ್ರಮುಖ ಜಲಾಶಯವಾದ ಹಾರಂಗಿಗೆ ನೀರಿನ ಹರಿವು ಹೆಚ್ಚಾಗಿದೆ. ಹಾರಂಗಿ ಜಲಾಶಯ ಶೀಘ್ರವೇ ಗರಿಷ್ಠ ಮಟ್ಟ ತಲುಪುವ ಸಾಧ್ಯತೆ ಇರುವುದರಿಂದಾಗಿ ನದಿಗೆ ಹೆಚ್ಚುವರಿ ನೀರು ಹರಿಸಲಾಗುತ್ತಿದೆ. ನದಿ ಪಾತ್ರದಲ್ಲಿರುವ ಮತ್ತು ನದಿಯ ಎರಡು ದಂಡೆಯಲ್ಲಿ ವಾಸಿಸುತ್ತಿರುವ ಜನರು ತಮ್ಮ ಆಸ್ತಿಪಾಸ್ತಿ ಹಾಗೂ ಜಾನುವಾರು ರಕ್ಷಣೆಗಳ ಬಗೆ ಮುನ್ನೆಚ್ಚರಿಕೆ ವಹಿಸುವಂತೆ ಹಾರಂಗಿ ಪುನರ್ವಸತಿ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಮುನ್ನೆಚ್ಚರಿಕೆ ನೀಡಿದ್ದಾರೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮ ದೊಡ್ಡಬಳ್ಳಾಪುರ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ನಡೆಯಿತು. ಕೃಷಿ ವಿಜ್ಞಾನಿ ಡಾ.ವೆಂಕಟೇಗೌಡ ರೈತರಿಗೆ ಮುಂಗಾರು ಹಂಗಾಮಿನಲ್ಲಿ ಹಮ್ಮಿಕೊಳ್ಳಬೇಕಾದ ಕೃಷಿ ಚಟುವಟಿಕೆಗಳಾದ ಮಾಗಿ ಉಳುಮೆ, ಸೊರಗು ಮತ್ತು ಬಂಜೆ ನಂಜು ರೋಗದ ನಿರೋಧಕ ತಳಿಗಳು, ಏಕದಳ ಮತ್ತು ದ್ವಿದಳ ಧಾನ್ಯಗಳಲ್ಲಿ ಬೀಜೋಪಚಾರ ಹಾಗೂ ಪೌಷ್ಠಿಕ ಕೈತೋಟದ ಮಹತ್ವ ಬಗ್ಗೆ ಮಾಹಿತಿ ನೀಡಿದರು. ರೈತರು ವಿಜ್ಞಾನಿಗಳೊಂದಿಗೆ ಚರ್ಚಿಸಿ, ಅವರ ಸಮಸ್ಯೆಗಳಿಗೆ ಸಲಹೆ ಪಡೆದರು. ಇನ್ನೊಂದೆಡೆ ವಿಜಯಪುರದಲ್ಲಿ ಕೇಂದ್ರ ಸರಕಾರದ ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಹಿನ್ನೆಲೆಯಲ್ಲಿ ರೈತರಿಗೆ ಬಿಜೋಪಚಾರ ಹಾಗೂ ಗೊಬ್ಬರಗಳ ಬಗ್ಗೆ ಮಾಹಿತಿ

ನೀಡಲಾಯಿತು. ಈ ಕುರಿತು ಜಿಲ್ಲಾ ಜಂಟಿ ಕೃಷಿ ನಿರ್ದೇಶಕಿ ಎಲ್.ರೂಪಾ ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

**ಧ್ವನಿ : ಎಲ್. ರೂಪಾ (೩೦ ಸೆಕೆಂಡ್‌ಗಳು)**

<><><><>

ಭಾರತದ ಯೋಗ ಪರಂಪರೆ ಮತ್ತು ಯುವಜನರ ಮೌಲ್ಯ ಪೂರ್ಣ ಪುನರುತ್ಥಾನದ ಅಗತ್ಯತೆಯನ್ನು ಸಾರುವ ಹಿನ್ನೆಲೆಯಲ್ಲಿ ಇದೇ ೫ ರಂದು ಬೆಂಗಳೂರಿನಲ್ಲಿ ರಾಷ್ಟ್ರೀಯ ಮಟ್ಟದ ಪೂರ್ವಭಾವಿ ಯೋಗ ಕಾರ್ಯಕ್ರಮ ನಡೆಯಲಿದೆ. 'ಯೋಗ ಮತ್ತು ವ್ಯಸನ ಮುಕ್ತತೆ-ಏಕ ಆರೋಗ್ಯ-ಏಕ ಭೂಮಿ' ಎಂಬ ಧ್ಯೇಯ ವಾಕ್ಯದೊಂದಿಗೆ ಈ ಕಾರ್ಯಕ್ರಮ ನಡೆಯಲಿದೆ. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಸಿಬಿಐ, ಎನ್‌ಸಿಬಿ, ಆಯುಷ್ ಸಚಿವಾಲಯದ ನೇತೃತ್ವದಲ್ಲಿ ಈ ಕಾರ್ಯಕ್ರಮ ನಡೆಯಲಿದೆ.

<><><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ೧೮ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಫೈನಲ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಪಂಜಾಬ್ ಕಿಂಗ್ಸ್ ತಂಡಗಳು ಪ್ರಶಸ್ತಿಗಾಗಿ ಸೆಣಸಲಿವೆ. ಪಂದ್ಯ ಸಂಜೆ ೭.೩೦ ಕ್ಕೆ ಆರಂಭವಾಗಲಿದೆ. ಚೊಚ್ಚಲ ಪ್ರಶಸ್ತಿ ಗೆಲ್ಲಲು ಎರಡೂ ತಂಡಗಳ ನಡುವೆ ಭಾರೀ ಪೈಪೋಟಿ ಏರ್ಪಡುವ ನಿರೀಕ್ಷೆಯಿದೆ. ಪಂದ್ಯಕ್ಕೂ ಮುನ್ನ ಅದ್ದೂರಿ ಸಮಾರೋಪ ಸಮಾರಂಭ ನಡೆಯಲಿದೆ. ಈ ಸಮಾರಂಭವನ್ನು ಭಾರತೀಯ ಸೇನೆಗೆ ಸಮರ್ಪಿಸಲು ಬಿಸಿಸಿಐ ನಿರ್ಧರಿಸಿದೆ. ಐಪಿಎಲ್ ಟೂರ್ನಿಯಲ್ಲಿ ಪಂಜಾಬ್ ವಿರುದ್ಧ ಫೈನಲ್ ಪಂದ್ಯದಲ್ಲಿ ಕಣಕ್ಕಿಳಿಯುತ್ತಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶುಭ ಹಾರೈಸಿದ್ದಾರೆ.

<><><><>

ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಜುಲೈ ೫ ರಂದು ನೀರಜ್ ಚೋಪ್ರಾ ಕ್ಲಾಸಿಕ್ ೨೦೨೫ ಅಂತಾರಾಷ್ಟ್ರೀಯ ಜಾವೆಲಿನ್ ಪಂದ್ಯ ನಡೆಯಲಿದೆ. ಆಪರೇಷನ್ ಸಿಂದೂರ್ ಹಿನ್ನೆಲೆಯಲ್ಲಿ ಮೇ ೨೪ರಂದು ನಿಗದಿಪಡಿಸಲಾಗಿದ್ದ ಪಂದ್ಯವನ್ನು ಮುಂದೂಡಲಾಗಿತ್ತು. ಈ ಕ್ರೀಡಾಕೂಟದಲ್ಲಿ ಟೋಕಿಯೊ ಒಲಿಂಪಿಕ್ಸ್ ಚಿನ್ನದ ಪದಕ ವಿಜೇತ ನೀರಜ್ ಚೋಪ್ರಾ, ಥಾಮಸ್ ರೋಹ್ಲರ್, ಅಂಡರ್ಸನ್ ಪೀಟರ್ಸ್ ಸೇರಿದಂತೆ ಹಲವು ಅಂತಾರಾಷ್ಟ್ರೀಯ ಆಟಗಾರರು ಈ ಪಂದ್ಯಾವಳಿಯಲ್ಲಿ ಭಾಗವಹಿಸಲಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>